## ಸಮಾಚಾರ ಸಣ್ಣದಲ್ಲ

### ಈಶ್ವರಪ್ಪ ವಿರುದ್ಧ ಪ್ರಕರಣ ದಾಖಲು




**ಶಿವಮೊಗ್ಗ:** ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬಂಡಾಯ ಅಭ್ಯರ್ಥಿ ಕೆಎಸ್ ಈಶ್ವರಪ್ಪ ವಿರುದ್ಧ ನೀತಿ ಸಂಹಿತೆ ಉಲ್ಲಂಘನೆ ಹಿನ್ನೆಲೆ ಜಿಲ್ಲೆಯ ಶಿಕಾರಿಪುರ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲು ಮಾಡಲಾಗಿದೆ. ಶಿಕಾರಿಪುರದಲ್ಲಿ ಮಾ.24ರಂದು ನಿಯಮ ಮೀರಿ ಬೈಕ್ ರ‍್ಯಾಲಿ ನಡೆಸಿದ್ದರು. 10 ಬೈಕ್, ಒಂದು ಜೀಪ್‌ಗೆ ಮಾತ್ರ ಅನುಮತಿ ಪಡೆದಿದ್ದರು. ಆದರೆ ರ‍್ಯಾಲಿಯಲ್ಲಿ 50ಕ್ಕೂ ಹೆಚ್ಚು ಬೈಕ್‌ಗಳು, 4 ಕಾರು ಭಾಗಿ ಹಿನ್ನೆಲೆ ಚುನಾವಣಾಧಿಕಾರಿ ದೂರಿನ ಮೇರೆಗೆ ಈಶ್ವರಪ್ಪ ವಿರುದ್ಧ ಕೇಸ್ ದಾಖಲು ಮಾಡಲಾಗಿದೆ. ಬೈಕ್‌ಗಳ ಮೇಲೆ ಓಂ ಬಾವುಟ ಕಟ್ಟಿಕೊಂಡು ನೀತಿ ಸಂಹಿತೆ ಉಲ್ಲಂಘನೆ ಮಾಡಲಾಗಿದೆ.

### ಕರ್ತವ್ಯ ಲೋಪ: ಮೇಲ್ವಿಚಾರಕ ಅಮಾನತು

**ದಾವಣಗೆರೆ:** ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಹರಿಹರ ತಾಲೂಕಿನ ಎಂಕೆಇಟಿಎಲ್ ಕೆ ಪರೀಕ್ಷಾ ಕೇಂದ್ರದ ಕೊಠಡಿ ಮೇಲ್ವಿಚಾರಕ ರಿಯಾಜ್ ಅಹಮದ್ ಅವರನ್ನು ಅಮಾನತು ಮಾಡಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಆದೇಶಿಸಿದ್ದಾರೆ. ಬುಧವಾರ ಸಮಾಜ ವಿಜ್ಞಾನ ವಿಷಯದ ಪರೀಕ್ಷೆ ನಡೆಯುತ್ತಿರುವ ಮಧ್ಯೆಯೇ ವಿದ್ಯಾರ್ಥಿಗಳು ಸಂಭಾಷಣೆಯಲ್ಲಿ ತೊಡಗಿದ್ದರೂ ಮೇಲ್ವಿಚಾರಕರಾಗಿ ಪರೀಕ್ಷಾ ಶಿಸ್ತು, ಗೌಪ್ಯತೆ ಕಾಪಾಡಿಕೊಳ್ಳುವಲ್ಲಿ ವಿಫಲವಾಗಿರುವುದರಿಂದ ಅಮಾನತು ಮಾಡಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರದ ಕೊಠಡಿಯಲ್ಲಿ ವೆಬ್ ಕಾಸ್ಟಿಂಗ್ ಮಾಡಲಾಗಿದ್ದು ನೇರ ದೃಶ್ಯಾವಳಿಗಳನ್ನು ಶಿಕ್ಷಣ ಇಲಾಖೆ ಆಯುಕ್ತರು ವೀಕ್ಷಣೆ ಮಾಡಿರುತ್ತಾರೆ. ಆಯುಕ್ತರು ನೀಡಿದ ನಿರ್ದೇಶನದ ಮೇರೆಗೆ ಹರಿಹರ ತಾಲೂಕಿನ ಬನ್ನಿಕೋಡು ಕರ್ನಾಟಕ ಪಬ್ಲಿಕ್ ಸ್ಕೂಲ್ ಚಿತ್ರಕಲಾ ಶಿಕ್ಷಕ ರಿಯಾಜ್ ಅಹಮದ್ ಅವರನ್ನು ಅಮಾನತು ಮಾಡಲಾಗಿದೆ.

### ಗ್ಯಾರಂಟಿಗಾಗಿ ನಮಗೆ ಮೋಸ ಮಾಡಬೇಡಿ



**ಹಿರೀಸಾವೆ:** ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳನ್ನು ನಾನು ವಿರೋಧ ಮಾಡಲ್ಲ, ಆದರೆ ಗ್ಯಾರಂಟಿಗಳಿಗಾಗಿ ನಮಗೆ ಮೋಸ ಮಾಡಬೇಡಿ' ಎಂದು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಹೇಳಿದರು. ಹಿರೀಸಾವೆಯಲ್ಲಿ ಬುಧವಾರ ಆಯೋಜಿಸಿದ್ದ ಹೋಬಳಿ ಮಟ್ಟದ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ನನಗೆ ನಿಲ್ಲುವ ಶಕ್ತಿ ಇಲ್ಲ, ಆದರೆ, ಹೋರಾಟ ಮಾಡುವ ಶಕ್ತಿ ಇದೆ. ದೇವರ ಅನುಗ್ರಹ ಇರುವವರೆಗೆ ನಿಮ್ಮ ಪರವಾಗಿ ಹೋರಾಡುತ್ತೇನೆ. ನಮ್ಮ ಪಕ್ಷಕ್ಕೆ ಬೆಂಬಲ ನೀಡಿ ಎಂದು ಮನವಿ ಮಾಡಿದರು.

### ಬಳ್ಳಾರಿ ಮೇಯರ್ ಚುನಾವಣೆ ಮುಂದಕ್ಕೆ

**ಬಳ್ಳಾರಿ:** ಮಾ.28ರಂದು ನಡೆಯಬೇಕಿದ್ದ ಬಳ್ಳಾರಿ ಮೇಯರ್ ಚುನಾವಣೆ ಮುಂದೂಡಿ ಕಲಬುರಗಿ ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದಾರೆ. ಚುನಾವಣೆ ನೀತಿ ಸಂಹಿತೆ ಜಾರಿ ಹಾಗೂ ಎಲ್ಲಾ ಅಧಿಕಾರಿಗಳು ಚುನಾವಣೆ ಕೆಲಸದಲ್ಲಿ ತೊಡಗಿಸಿಕೊಂಡಿರುವ ಹಿನ್ನೆಲೆ ಮೇಯರ್ ಚುನಾವಣೆ ಮುಂದಕ್ಕೆ ಹಾಕಿ ಆದೇಶ ಹೊರಡಿಸಲಾಗಿದೆ. ಲೋಕಸಭೆ ಚುನಾವಣೆ ಮುಗಿದ ಬಳಿಕ ಮೇಯರ್ ಚುನಾವಣೆ ದಿನಾಂಕ ನಿಗದಿ ಮಾಡೋದಾಗಿ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಬಳ್ಳಾರಿ ಪಾಲಿಕೆಯಲ್ಲಿ ಕಾಂಗ್ರೆಸ್ ಬಹುಮತ ಹೊಂದಿದ್ದು, ಪ್ರಸ್ತುತ ಮೇಯರ್ ಶ್ವೇತಾ ಅವಧಿ ಮಗಿದ ಹಿನ್ನೆಲೆ ಮೇಯರ್ ಚುನಾವಣೆ ನಿಗದಿಯಾಗಿತ್ತು.

### ಮಕ್ಕಳಿಗೆ ವಿಷವುಣಿಸಿ ಆತ್ಮಹತ್ಯೆಗೆ ಯತ್ನ

**ಬಾಗೇಪಲ್ಲಿ:** ತನ್ನ ಐವರು ಹೆಣ್ಣು ಮಕ್ಕಳಿಗೆ ವಿಷ ಕುಡಿಸಿ ತಾಯಿ ಕೂಡ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಆಂಧ್ರಪ್ರದೇಶದ ಗಡಿಭಾಗದ ಚಿಲಮತ್ತೂರು ಮಂಡಲ ವ್ಯಾಪ್ತಿಯ ಮರವಕೊತ್ತೂಪಲ್ಲಿಯಲ್ಲಿ ನಡೆದಿದೆ. 6 ಜನ ಅಸ್ವಸ್ಥರಿಗೂ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ತಾಯಿ ಅನಿತಾ ಹಾಗೂ ಆಕೆಯ ಐದು ಜನ ಹೆಣ್ಣು ಮಕ್ಕಳಾದ ಲಾವಣ್ಯ (11), ಧರಣಿ (9), ಕಾವ್ಯ (8), ರಕ್ಷಿತಾ (5), ಶ್ರೀವಲ್ಲಿ (2) ಅವರನ್ನು ಮೊದಲು ಬಾಗೇಪಲ್ಲಿ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಗೆ ಸೇರಿಸಲಾಗಿದೆ. ಗರ್ಭಿಣಿಯಾಗಿರುವ ತಾಯಿ ಅನಿತಾ ಅವರಿಗೆ ಐ.ಸಿ.ಯು ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಗಂಡ ಗೋಪಾಲ ಎಂಬಾತನಿಂದ ಕಿರುಕುಳ ಆರೋಪ ಕೇಳಿಬಂದಿದೆ.

### ಇಬ್ಬರು ಆತ್ಮಹತ್ಯೆ

**ಸೋಮವಾರಪೇಟೆ:** ಪಟ್ಟಣದ ವಸತಿ ಗೃಹವೊಂದರಲ್ಲಿ ತೆಲಂಗಾಣ ರಾಜ್ಯದ ಮೇದಾಪುರಪು ರಾಜು (55) ಮತ್ತು ಮೇದಾಪುರಪು ಸ್ವಾತಿ (54) ಎಂಬುವವರು ಬುಧವಾರ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೇಲ್ನೋಟಕ್ಕೆ ಇವರಿಬ್ಬರು ಪತಿ, ಪತ್ನಿ ಎಂದು ಕಂಡು ಬಂದಿದೆ. ಆದರೆ, ಇನ್ನೂ ಖಚಿತವಾಗಿಲ್ಲ. ಜ. 4ರಿಂದಲೂ ಇದೇ ವಸತಿಗೃಹದಲ್ಲಿ ಇವರು ಆಗಾಗ್ಗೆ ಬಂದು ತಂಗುತ್ತಿದ್ದರು. ಕೋಣೆಯಲ್ಲಿ ಹೆಚ್ಚಿನ ಪ್ರಮಾಣದ ಔಷಧಿಗಳು ಸಿಕ್ಕಿವೆ. ಯಾವು ದಾದರೂ ಕಾಯಿಲೆಗೆ ಚಿಕಿತ್ಸೆ ಪಡೆದುಕೊಳ್ಳುತ್ತಿ ರಬಹುದು ಎಂದು ಅನ್ನಿಸುತ್ತಿದೆ. ಒಂದೇ ಹಗ್ಗಕ್ಕೆ ಇವರು ನೇಣು ಹಾಕಿಕೊಂಡಿದ್ದಾರೆ. ಇವರ ಸಂಬಂಧಿಕರ ಹುಡುಕಾಟ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

---

### ಕೆಪಿಸಿಸಿ ಯುವಘಟಕದ ಕಾರ್ಯಾಧ್ಯಕ್ಷರಾಗಿ ಮಂಜುನಾಥ್ ಗೌಡ ಪದಗ್ರಹಣ

# ವ್ಯಕ್ತಿಪೂಜೆ ಬಿಟ್ಟು, ಪಕ್ಷ ಪೂಜೆ ಮಾಡಿ: ಡಿಸಿಎಂ ಡಿಕೆಶಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಯುವಕರು ವ್ಯಕ್ತಿಪೂಜೆ ಮಾಡುವುದನ್ನು ಬಿಟ್ಟು, ಪಕ್ಷ ಮಾಡಬೇಕು. ನಮಗೆ ಜೈಕಾರ ಹಾಕುವ ಬದಲು, ಪಕ್ಷದ ಸಂಘಟನೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಯುವ ಕಾಂಗ್ರೆಸ್ ನೂತನ ಕಾರ್ಯಾಧ್ಯಕ್ಷ ಮಂಜುನಾಥ ಗೌಡ ಅವರ ಪದಗ್ರಹಣ ಕಾರ್ಯಕ್ರಮ ಹಾಗೂ ಯುವ ನ್ಯಾಯ ಗ್ಯಾರಂಟಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯುವಕರು ನಾಯಕರಾಗಬೇಕಾದರೆ ನೀವು ಪ್ರತಿಬೂತ್‌ನಲ್ಲಿ ಐದು ಯುವಕರಿಗೆ ಜವಾಬ್ದಾರಿ ನೀಡಿ, ಗ್ಯಾರಂಟಿ ಯೋಜನೆಗಳ ಪ್ರಚಾರ ಮಾಡಬೇಕು. ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಮುನ್ನಡೆ ತಂದುಕೊಡಬೇಕು. ನೀವು ನನಗೆ ಹಾಗೂ ಬೇರೆಯವರಿಗೆ ಜಿಂದಾಬಾದ್ ಹಾಕುವುದು ಬೇಡ. ವ್ಯಕ್ತಿಪೂಜೆ ಬಿಟ್ಟು ಪಕ್ಷಪೂಜೆ ಮಾಡಿ ಎಂದು ಸಲಹೆ ನೀಡಿದರು.

ನಮ್ಮ ಸರಕಾರದಲ್ಲಿ ಎನ್‌ಎಸ್‌ಯುಐ ಅಧ್ಯಕ್ಷರಿಗೆ ಸಚಿವ ಸಂಪುಟ ಸಭೆಯ ಸ್ಥಾನಮಾನ ನೀಡಲಾಗಿದೆ. ಆ ಮೂಲಕ ನಾವು ಯುವಕರಿಗೆ ಆದ್ಯತೆ ನೀಡಿದ್ದೇವೆ. ತಾಲೂಕು, ಜಿಲ್ಲಾ ಮಟ್ಟದ ಪಕ್ಷದ ಸಮಿತಿಯಲ್ಲಿ ಯುವ ಕಾಂಗ್ರೆಸ್ ಹಾಗೂ ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳನ್ನು ಹೊಂದಿರಬೇಕು. ಇನ್ನು ಪಕ್ಷದ ಕಾರ್ಯಕರ್ತರಿಗೆ ವಿವಿಧ ಸಮಿತಿಗಳಲ್ಲಿ ಅಧಿಕಾರ ಹಂಚಲಾಗುವುದು ಎಂದು ಹೇಳಿದರು.

**ಯುವಕರ ಮೇಲೆ ನಂಬಿಕೆಯಿಟ್ಟಿದ್ದು ಕಾಂಗ್ರೆಸ್**

ಕಾಂಗ್ರೆಸ್ ದೊಡ್ಡ ಇತಿಹಾಸವುಳ್ಳ ಪಕ್ಷ. ದೇಶದಲ್ಲಿ 21 ವರ್ಷದವರಿಗೆ ಮತದಾನದ ಹಕ್ಕನ್ನು ನೀಡುತ್ತಿದ್ದರು. ರಾಜೀವ್ ಗಾಂಧಿ ಅವರು ದೇಶದ ಯುವಕರ ಮೇಲೆ ನಂಬಿಕೆಯಿಟ್ಟು, ಮತದಾನದ ಹಕ್ಕನ್ನು 18 ವರ್ಷಕ್ಕೆ ಇಳಿಸಿದರು. ಈ ವಿಚಾರವಾಗಿ ಸಂಸತ್ತಿನಲ್ಲಿ ಚರ್ಚೆ ನಡೆಯುವಾಗ ಬಿಜೆಪಿ ನಾಯಕರೆಲ್ಲರೂ ಈ ನಿರ್ಧಾರವನ್ನು ಟೀಕೆ ಮಾಡುತ್ತಿದ್ದರು. ಆಡುವ ಮಕ್ಕಳಿಗೆ ಮತದಾನದ ಹಕ್ಕು ನೀಡಲಾಗುತ್ತಿದೆ ಎಂದು ಟೀಕಿಸಿದರು. ಆದರೆ ರಾಜೀವ್ ಗಾಂಧಿ ಅವರು ದೇಶದ ಯುವಕರ ಮೇಲೆ ಅಚಲ ವಾದ ನಂಬಿಕೆಯನ್ನು ಇಟ್ಟಿದ್ದರು ಎಂದು ನೆನಪಿಸಿಕೊಂಡರು.

ಲೋಕಸಭಾ ಚುನಾವಣೆಯಲ್ಲಿ 28 ಕ್ಷೇತ್ರಗಳ ಪೈಕಿ 14 ಕ್ಷೇತ್ರಗಳಲ್ಲಿ ಯುವಕರಿಗೆ ಟಿಕೆಟ್ ನೀಡಲಾಗಿದೆ. ಬೇರೆ ಯಾವುದೇ ಪಕ್ಷದಲ್ಲಿ ಇಂತಹ ತೀರ್ಮಾನ ಮಾಡಿಲ್ಲ. ವಿಧಾನಸಭೆಯಲ್ಲೂ 53 ಮಂದಿ ಯುವಕರಿಗೆ ಪಕ್ಷ ಟಿಕೆಟ್ ನೀಡಿತ್ತು. ಯುವಕರು ಹಾಗೂ ಮಹಿಳೆಯರು ನಮ್ಮ ಪಕ್ಷವನ್ನು ಅಧಿಕಾರಕ್ಕೆ ತರುವ ವಿಶ್ವಾಸವಿದೆ. ಅದೇ ಕಾರಣಕ್ಕೆ ಮಹಿಳೆಯರಿಗಾಗಿ ಶಕ್ತಿ, ಗೃಹಲಕ್ಷ್ಮಿ ಯೋಜನೆ ಯುವಕರಿಗಾಗಿ ಯುವನಿಧಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಬಿಜೆಪಿ ವರ್ಷಕ್ಕೆ 2 ಕೋಟಿ ಉದ್ಯೋಗ ನೀಡುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದಿದ್ದು, ನಂತರ ಯುವಕರಿಗೆ ಪಕೋಡಾ ಮಾರಿ ಎಂದು ಹೇಳಿ ಅವಮಾನ ಮಾಡಿತ್ತು ಎಂದು ಬಿಜೆಪಿ ವಿರುದ್ಧ ಟೀಕಿಸಿದರು.

ಕಾರ್ಯಕ್ರಮದಲ್ಲಿ ಸಚಿವ ದಿನೇಶ್ ಗುಂಡೂರಾವ್, ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿ, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ, ಶಾಸಕ ರಿಜ್ವಾನ್ ಅರ್ಷದ್, ಕೆಪಿಸಿಸಿ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹ್ಮದ್ ಹ್ಯಾರಿಸ್ ನಲಪಾಡ್ ಸೇರಿ ಹಲವರಿದ್ದರು.




ಕೆಪಿಸಿಸಿ ಕಚೇರಿಯ ಭಾರತ ಜೋಡೋ ಸಭಾಂಗಣದಲ್ಲಿ ಬುಧವಾರ ಸಂಜೆ ನಡೆದ ಯುವ ಕಾಂಗ್ರೆಸ್‌ನ ಕಾರ್ಯಾಧ್ಯಕ್ಷರಾಗಿ ಮಂಜುನಾಥ ಗೌಡ ಅವರು ಅಧಿಕಾರ ಸ್ವೀಕರಿಸಿದರು. ಈ ವೇಳೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಸಚಿವ ದಿನೇಶ್ ಗುಂಡೂರಾವ್, ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿ, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ, ಶಾಸಕ ರಿಜ್ವಾನ್ ಅರ್ಷದ್, ಕೆಪಿಸಿಸಿ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹ್ಮದ್ ಹ್ಯಾರಿಸ್ ನಲಪಾಡ್ ಸೇರಿ ಹಲವರಿದ್ದರು

**ಚಿಕ್ಕವಯಸ್ಸಿಗೆ ಪಕ್ಷಕ್ಕೆ ಬಂದವರು, ಬಿಡಲ್ಲ**

ಚಿಕ್ಕವಯಸ್ಸಿನಲ್ಲಿ ಕಾಂಗ್ರೆಸ್ ಪಕ್ಷದ ಸದಸ್ಯತ್ವ ಪಡೆದವರು ಎಂದಿಗೂ ಪಕ್ಷ ಬಿಡುವುದಿಲ್ಲ. ಹೀಗಾಗಿ ಯುವ ಕಾಂಗ್ರೆಸ್ ಸದಸ್ಯತ್ವವನ್ನು ಹೆಚ್ಚಿಸಲು ಸಲಹೆ ನೀಡುತ್ತೇನೆ. ಯುವ ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆಗೆ ಅವಕಾಶ ನೀಡುವುದಿಲ್ಲ. ಗುಂಪುಗಾರಿಕೆ ಮಾಡಿದರೆ ನಿಮ್ಮ ಅಧಿಕಾರದಿಂದ ಇಳಿಸಿ ಬೇರೆಯವರಿಗೆ ಅವಕಾಶ ನೀಡಲಾಗುವುದು. ರಾಹುಲ್ ಗಾಂಧಿ ಅವರಿಗೆ ಯುವಕರ ಮೇಲೆ ಅಪಾರವಾದ ನಂಬಿಕೆ ಇದೆ. ಅದೇ ಕಾರಣಕ್ಕೆ ಯುವ ನ್ಯಾಯದ ಮೂಲಕ ಐದು ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದಾರೆ ಎಂದರು.

**ಕಾಂಗ್ರೆಸ್ ಶಕ್ತಿ ಬಲಪಡಿಸೋಣ**

ಯುವ ಕಾಂಗ್ರೆಸ್ ಕಾರ್ಯಾಧ್ಯಕ್ಷ ಮಂಜುನಾಥ್ ಗೌಡ ಮಾತನಾಡಿ, ಯಾರೇ ಇರಲಿ, ಇಲ್ಲದಿರಲಿ ಪಕ್ಷ ಮುನ್ನಡೆಯುತ್ತದೆ. ವ್ಯಕ್ತಿಗಿಂತ ಪಕ್ಷ ದೊಡ್ಡದು ಎಂದು ಕೆಪಿಸಿಸಿ ಅಧ್ಯಕ್ಷರು ಯಾವಾಗಲೂ ಹೇಳುತ್ತಾರೆ. ಅವರ ಮಾತು ನಿಜ. ನಾವೆಲ್ಲ ಅವರ ಕೈ ಬಲಪಡಿಸೋಣ. ಪಕ್ಷವನ್ನು ಸಂಘಟಿಸೋಣ. ನಾನು ಈ ಮಟ್ಟಕ್ಕೆ ಬೆಳೆಯಲು ಶಿವಕುಮಾರ್ ಅವರ ಆಶೀರ್ವಾದ ಕಾರಣವಾಗಿದೆ ಎಂದು ತಿಳಿಸಿದರು. ಕೆಪಿಸಿಸಿ ನೂತನ ಕಾರ್ಯಾಧ್ಯಕ್ಷರಾಗಿ ಎಚ್.ಎಸ್ ಮಂಜುನಾಥ ಗೌಡ ಅವರು ಅಧಿಕಾರ ಸ್ವೀಕರಿಸಿದರು. ಇದಕ್ಕೂ ಮೊದಲು ಎರಡು ಬಾರಿ ಕಾಂಗ್ರೆಸ್ ಪಕ್ಷದ ವಿದ್ಯಾರ್ಥಿ ಸಂಘಟನೆ ಎನ್ ಎಸ್ ಯುಐನ ರಾಜ್ಯಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು.

> ನಮ್ಮ ಮತ್ತು ನಿಮ್ಮ ಕಾಂಗ್ರೆಸ್ ಸರಕಾರ ನುಡಿದಂತೆ ನಡೆದಿದೆ. ರಾಜ್ಯದಲ್ಲಿ ಬಿಜೆಪಿ ಹಾಗೂ ಮೋದಿ ಅಲೆಯಿಲ್ಲ. ರಾಜ್ಯದಲ್ಲಿ 20ಕ್ಕೂ ಹೆಚ್ಚು ಕ್ಷೇತ್ರಗಳನ್ನು ಗೆಲ್ಲಲು ಎಲ್ಲರೂ ಶ್ರಮಿಸಬೇಕು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೂ ಕೂಡ ಒಂದು ಕಾಲದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದರು. ಅವರ ಬದುಕು, ಹೆಜ್ಜೆ ನಮಗೆ ಆದರ್ಶವಾಗಿರಬೇಕು.
> – **ಡಿ.ಕೆ.ಶಿವಕುಮಾರ್**, ಕೆಪಿಸಿಸಿ ಅಧ್ಯಕ್ಷ

---

### ರಾಜೀನಾಮೆ ನೀಡಲು ಹೋದವರನ್ನು ವಾಪಸು ಕರೆತಂದ ಬೈರತಿ । ಬಂಡಾಯ ನಾಯಕರನ್ನು ಸಮಾಧಾನಪಡಿಸಿದ ಶಾಸಕ ಪ್ರದೀಪ್ ಈಶ್ವರ್ । ರಾಜೀನಾಮೆ ಕೊಟ್ಟಿಲ್ಲ; ಕೊಟ್ಟರೆ ಪಡೆಯುವೆ ಎಂದ ಸಭಾಪತಿ ಬಸವರಾಜ ಹೊರಟ್ಟಿ

# ಬಸವರಾಜ ಹೊರಟ್ಟಿ ಕಚೇರಿಯಲ್ಲಿ ಹೈಡ್ರಾಮಾ

**ಬೆಂಗಳೂರು:** ಕೋಲಾರ ಲೋಕಸಭಾ ಟಿಕೆಟ್‌ನಲ್ಲಿ ಹಂಚಿಕೆಯಲ್ಲಿನ ವಿವಾದದಿಂದ ಭುಗಿಲೆದ್ದ ಭಿನ್ನಮತ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಕೊಠಡಿಯಲ್ಲಿ ಭಾರಿ ಹೈಡ್ರಾಮಾಕ್ಕೆ ಸಾಕ್ಷಿಯಾಯಿತು.

ಪಕ್ಷದ ತೀರ್ಮಾನವನ್ನು ಖಂಡಿಸಿ ವಿಧಾನಪರಿಷತ್ ಸದಸ್ಯರಾದ ನಜೀರ್ ಅಹ್ಮದ್ ಹಾಗೂ ಅನಿಲ್‌ಕುಮಾರ್ ಅವರು ತಮ್ಮ ರಾಜೀನಾಮೆ ಪತ್ರವನ್ನು ಸಭಾಪತಿ ಹೊರಟ್ಟಿ ಅವರಿಗೆ ನೀಡಲು ವಿಧಾನಸೌಧಕ್ಕೆ ತೆರಳಿದರು. ಮೊದಲೇ ಸಮಯ ಕೇಳಿದ್ದರಿಂದ, ಹೊರಟ್ಟಿ ಅವರೂ ಸದಸ್ಯರಿಗೆ ಕಾಯುತ್ತಿದ್ದರು.

ಮೊದಲಿಗೆ ಈ ಇಬ್ಬರು ಖಾಲಿ ಹಾಳೆಯಲ್ಲಿ ತಮ್ಮ ರಾಜೀನಾಮೆಯನ್ನು ಸಲ್ಲಿಸಿದ್ದರಿಂದ ಲೆಟರ್ ಹೆಡ್‌ನಲ್ಲಿ ತಂದುಕೊಡುವಂತೆ ಹೊರಟ್ಟಿ ಸೂಚಿಸಿದರು. ಲೆಟರ್ ಹೆಡ್ ನಲ್ಲಿ ಸಿದ್ಧಪಡಿಸುವ ವೇಳೆಗೆ ಅಲ್ಲಿಗೆ ಆಗಮಿಸಿದ ಸಚಿವ ಬೈರತಿ ಸುರೇಶ್ ಹಾಗೂ ಶಾಸಕ ಪ್ರದೀಪ್ ಈಶ್ವರ್ ಅಸಮಾಧಾನಿತರನ್ನು ಸಂತೈಸುವ ಪ್ರಯತ್ನಕ್ಕೆ ಮುಂದಾದರು. ಈ ವೇಳೆ ರಾಜಕೀಯ ಚರ್ಚೆ ನಡೆಸುವ ವೇಳೆ ನಾನಿರುವು ದಿಲ್ಲವೆಂದು ಹೊರಟ್ಟಿ ಅವರು ತಮ್ಮ ಆ್ಯಂಟಿ ಛೇಂಬರ್‌ಗೆ ಹೋದರು. ಬಳಿಕ ಸಚಿವರು ಈ ಇಬ್ಬರು ರಾಜೀನಾಮೆ ನೀಡುವುದನ್ನು ತಪಿಸಿ, ಸಿಎಂ, ಡಿಸಿಎಂ ಜತೆ ಚರ್ಚೆಗೆ ಆಹ್ವಾನಿಸಿ ಬಂಡಾಯವನ್ನು ತಾತ್ಕಲಿಕವಾಗಿ ತಡೆಹಿಡಿದರು.

**ಮಂಗಳೂರು ಪ್ರವಾಸ ರದ್ದು:** ಈ ನಡುವೆ ವಿಧಾನಸಭೆಯ ಮೂರು ಶಾಸಕರು ವಿಧಾನಸೌಧಕ್ಕೆ ಆಗಮಿಸಿ, ರಾಜೀನಾಮೆ ನೀಡಲು ಮುಂದಾದರು. ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ಮಂಗಳೂರಿನಲ್ಲಿರುವ ಕಾರಣ, ವಿಧಾನಸೌಧದ ವಿಧಾನಸಭೆ ಕಾರ್ಯದರ್ಶಿ ಕೊಠಡಿಗೆ ಆಗಮಿಸಿ ಚರ್ಚೆ ನಡೆಸಿದರು.

ಮಂಗಳೂರಿನಲ್ಲಿರುವ ವಿಧಾನಸಭೆ ಸ್ಪೀಕರ್ ಯು. ಟಿ ಖಾದರ್ ಭೇಟಿಗೆ ಕೋಲಾರ ಶಾಸಕರು ಸಮಾಯವಕಾಶ ಕೇಳಿದ್ದರು. ಅಲ್ಲಿಗೆ ತೆರಳಲು ವಿಮಾನ ಟಿಕೆಟ್ ಸಹ ಬುಕ್ ಮಾಡಿದ್ದರು. ಬಳಿಕ ಖಾದರ್ ಅವರು ಮಂಗಳೂರಿಗೆ ಬರುವುದು ಬೇಡವೆಂದು ಹೇಳಿದ್ದರಿಂದ ಈ ಯೋಜನೆಯನ್ನು ಕೈಬಿಟ್ಟರು. ಈ ವೇಳೆಗಾಗಲೇ, ಪಕ್ಷದ ನಾಯಕರು ಸಭೆ ನಡೆಸುವ ಭರವಸೆ ನೀಡಿದ್ದರಿಂದ ರಾಜೀನಾಮೆ ವಿಷಯವನ್ನು ಮುಂದಕ್ಕೆ ಹಾಕಿದ್ದಾರೆ ಎನ್ನಲಾಗಿದೆ.



ಕೋಲಾರ ಲೋಕಸಭಾ ಟಿಕೆಟ್‌ನಲ್ಲಿ ಹಂಚಿಕೆಯಲ್ಲಿನ ವಿವಾದದಿಂದ ಭುಗಿಲೆದ್ದ ಭಿನ್ನಮತ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಕೊಠಡಿಯಲ್ಲಿ ಭಾರಿ ಹೈಡ್ರಾಮಾ ನಡೆಯಿತು.

> ಮುನಿಯಪ್ಪ ನನ್ನನ್ನು ಎರಡು ಬಾರಿ ಸೋಲಿಸಿದ್ದರು. ಆಮೇಲೆ ನಾನು ಪಕ್ಷದಿಂದ ಟಿಕೆಟ್ ಸಿಗದೇ ಪಕ್ಷೇತರವಾಗಿ ಸ್ಪರ್ಧೆ ಮಾಡುವಂತೆ ಮಾಡಿದರು. ಆ ನೋವಿದೆ. ಇದರೊಂದಿಗೆ ನಮ್ಮ ಕ್ಷೇತ್ರದ ಕಾರ್ಯಕರ್ತರಿಗೂ ಮುನಿಯಪ್ಪ ನೋವು ಕೊಟ್ಟಿದ್ದಾರೆ. ಹೀಗಾಗಿ ಅವರ ಕುಟುಂಬಕ್ಕೆ ಟಿಕೆಟ್ ಕೊಡಬಾರದು. ಸಿಎಂ, ಡಿಸಿಎಂ ದುಡುಕಬೇಡಿ ಅಂದಿದ್ದಾರೆ. ಆದ್ದರಿಂದ ರಾಜೀನಾಮೆ ನೀಡಿಲ್ಲ.
> – **ಡಾ.ಎಂ.ಸಿ. ಸುಧಾಕರ್**, ಸಚಿವ

> ದಲಿತ ಬಲಗೈ ಸಮುದಾಯದಲ್ಲಿ ಯಾರಿಗೇ ಕೊಟ್ಟರೂ ನಮ್ಮ ಅಭ್ಯಂತರವಿಲ್ಲ. ಮುನಿಯಪ್ಪ ಅವರು ವಿಧಾನಸಭೆ ಚುನಾವಣೆಯಲ್ಲಿ ನಮ್ಮೆಲ್ಲರನ್ನು ಸೋಲಿಸುವುದಕ್ಕೆ ಪ್ರಯತ್ನ ಪಟ್ಟಿದ್ದರು. ಈಗ ಅವರ ಪರ ಅಭ್ಯರ್ಥಿಗೆ ಟಿಕೆಟ್ ಕೊಡಬಾರದು. ಕೋಲಾರದಲ್ಲಿ ಪಕ್ಷ ಕಟ್ಟುವುದಕ್ಕೆ ತುಂಬಾ ಕಷ್ಟಪಟ್ಟಿದ್ದೇವೆ.
> – **ನಂಜೇಗೌಡ**, ಶಾಸಕ

---

### ಮೋದಿ ಗ್ಯಾರಂಟಿಗಳು ಬರೀ ಟಿವಿಗಳಲ್ಲಿ ಮಾತ್ರ

# ದಕ್ಷಿಣ ಭಾರತದಲ್ಲಿ ಮೋದಿ ಅಲೆ ಇಲ್ಲ

**ಕಲಬುರಗಿ:** ದಕ್ಷಿಣ ಭಾರತದಲ್ಲಿ ಮೋದಿ ಸುನಾಮಿಯ ಯಾವ ಅಲೆಯೂ ಇಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ಗ್ಯಾರಂಟಿಗಳು ಬರೀ ಟಿವಿಗಳಲ್ಲಿ ಮಾತ್ರವಿದೆ. ನಮ್ಮ ಗ್ಯಾರಂಟಿ ನಮ್ಮ ಕೈಯಲ್ಲಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ನಾವು ಮುಂದಿನ 20 ವರ್ಷಗಳ ಬಗ್ಗೆ ಚಿಂತನೆ ನಡೆಸಿ ಟಿಕೆಟ್ ನೀಡುತ್ತಿದ್ದೇವೆ. ಯುವಕರು, ಮಹಿಳೆಯರಿಗೆ ಆದ್ಯತೆ ನೀಡಿದ್ದೇವೆ. ಆದರೆ ಮುಂದಿನ 20 ದಿನಗಳಲ್ಲಿ ಅವರಲ್ಲಿ ಏನಾಗುತ್ತಿದೆ ಎಂಬುದು ತಿಳಿದಿಲ್ಲ. ಸಚಿವರು ಹೆದರಿದ್ದಾರೆ ಎಂದು ಹೇಳುವ ವಿಜಯೇಂದ್ರ, ಅವರಿಗೆ ನಮ್ಮ ಪಕ್ಷದ ಟಿಕೆಟ್ ನಿರ್ಧಾರದ ಚಿಂತೆಯೇಕೆ? ಕಳೆದ 10 ವರ್ಷದಲ್ಲಿ ಮೋದಿ ಅವರು ಕೆಲಸ ಮಾಡಿಲ್ಲ ಎಂದೆ ಇಂದಿಗೂ ಕಾಂಗ್ರೆಸ್ ಹೆಸರು ಹೇಳಿಕೊಂಡು ಮತ ಪಡೆಯುತ್ತಿದ್ದಾರೆ. ಮೋದಿ ಗ್ಯಾರಂಟಿ ಟಿವಿಯಲ್ಲಿದೆ ನಮ್ಮ ಗ್ಯಾರಂಟಿ ಕೈಯಲ್ಲಿದೆ ಎಂದು ಹೇಳಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ನಾಯಕತ್ವವನ್ನು ಅವರ ಪಕ್ಷದವರೇ ಒಪ್ಪಿಕೊಳ್ಳುತ್ತಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಕುಟುಂಬ ರಾಜಕಾರಣ ಇದೆ ಎಂದು ಹೇಳಿಕೊಳ್ಳುವ ಬಿಜೆಪಿ, ಕಾಂಗ್ರೆಸ್ ಗಿಂತ ಹೆಚ್ಚಿನ ಕುಟುಂಬ ರಾಜಕಾರಣ ಬಿಜೆಪಿಯಲ್ಲಿದೆ. ಯಾವ ಪಕ್ಷದಲ್ಲಿ ಅತೀ ಹೆಚ್ಚು ಕುಟುಂಬ ರಾಜಕಾರಣ ಇದೆ ಎಂಬುದು ಡಿಎನ್ ಪರೀಕ್ಷೆ ಮಾಡೋಣ. ಆಗ ಬಹಿರಂಗವಾಗಲಿದೆ. ವಿತ್ತ ಡಿಎನ್ ಕಿಟ್ ಇಟ್ಟುಕೊಂಡು ಈ ವಿಷಯದ ಕುರಿತಾಗಿ ಚರ್ಚೆ ಮಾಡೋಣ ಬನ್ನಿ ಎಂದು ಬಿಜೆಪಿ ಪಕ್ಷಕ್ಕೆ ಸವಾಲು ಹಾಕಿದರು.



> ಪ್ರಧಾನಿ ನರೇಂದ್ರ ಮೋದಿ ಅವರು ಕರ್ನಾಟಕಕ್ಕೆ ಬಂದಾಗಲೆಲ್ಲ ಶ್ಯಾಡೋ ಸಿಎಂ ಎಂದು ಹೇಳಿಕೆ ನೀಡುತ್ತಾರೆ. ಆದರೆ, ನಮ್ಮಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎನ್ನುವುದು ಸ್ಪಷ್ಟವಾಗಿದೆ.
> – ಪ್ರಿಯಾಂಕ್ ಖರ್ಗೆ ಗ್ರಾಮೀಣಾಭಿವೃದ್ಧಿ ಸಚಿವ

---

### ಛತ್ತೀಸ್‌ಗಡದಲ್ಲಿ ಭದ್ರತಾ ಪಡೆ ಕಾರ್ಯಾಚರಣೆ

# ಮಹಿಳೆಯರಿಬ್ಬರು ಸೇರಿ ಆರು ನಕ್ಸಲರು ಹತ

**ಬಿಜಾಪುರ:** ಛತ್ತೀಸ್‌ಗಡದ ಹರಿತ್ ಜಿಲ್ಲೆಯ ಚಿಪುರ್‌ಭಟ್ಟಿ ಪ್ರದೇಶದಲ್ಲಿ ಬುಧವಾರ ಭದ್ರತಾ ಪಡೆ ಯೋಧರು ಮತ್ತು ಶಸ್ತ್ರಸಜ್ಜಿತ ನಕ್ಸಲರ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದ್ದು, ಇಬ್ಬರು ಮಹಿಳಾ ನಕ್ಸಲರು ಸೇರಿದಂತೆ ಸಿಪಿಐ(ಮಾವೋವಾದಿ) ಗುಂಪಿನ ಆರು ಬಂಡುಕೋರರು ಹತರಾಗಿದ್ದಾರೆ.

ಮಾವೋವಾದಿ ನಕ್ಸಲರು ಈ ಪ್ರದೇಶದಲ್ಲಿ ಮೂವರು ಗ್ರಾಮಸ್ಥರನ್ನು ಕೊಂದ ನಂತರ ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್), ಎಲೈಟ್ ಕೋಬ್ರಾ ಘಟಕ ಮತ್ತು ಜಿಲ್ಲಾ ರಿಸರ್ವ್ ಗಾರ್ಡ್‌ಗಳ (ಡಿಆರ್‌ಜಿ) ಜಂಟಿ ತಂಡ ತೀವ್ರ ಶೋಧ ಕಾರ್ಯಾಚರಣೆ ನಡೆಸಿದೆ. ಪೀಪಲ್ ಲಿಬರೇಶನ್ ಗೆರಿಲ್ಲಾ ಆರ್ಮಿಯ(ಪಿಎಲ್‌ಜಿಎ) 10 ಮಾವೋವಾದಿಗಳು ತಲ್ವೇರು ನದಿಯ ಸಮೀಪದಲ್ಲಿದ್ದಾರೆ ಎಂಬ ಮಾಹಿತಿ ಸಿಕ್ಕ ಬಳಿಕ ಭದ್ರತಾ ಪಡೆಗಳು ಜಂಟಿ ತಂಡ ಮಂಗಳವಾರ ತಡರಾತ್ರಿ ಕಾರ್ಯಾಚರಣೆಗೆ ತೆರಳಿತು. ಬುಧವಾರ ನಸುಕಿನಲ್ಲಿ ಎರಡೂ ತಂಡಗಳ ನಡುವೆ ಗುಂಡಿನ ಚಕಮಕಿಯಾಗಿದೆ. ಹಲವು ಮಾವೋವಾದಿಗಳು ಗಾಯಗೊಂಡಿರುವ ಸಾಧ್ಯತೆಯಿದೆ. ಕಾರ್ಯಾಚರಣೆ ಸ್ಥಳದಲ್ಲಿ ಇಬ್ಬರು ಮಹಿಳೆ ಸೇರಿದಂತೆ ಆರು ನಕ್ಸಲರ ಮೃತದೇಹಗಳು ಸಿಕ್ಕಿವೆ ಎಂದು ಭದ್ರತಾ ಪಡೆಗಳು ತಿಳಿಸಿವೆ.



ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಅವರು ಕನಕಪುರ ಕೋಡಿಹಳ್ಳಿ ಪ್ಲಾಂಟೇಷನ್‌ನಲ್ಲಿರುವ ನಿವಾಸದಲ್ಲಿ ತಮ್ಮ ತಾಯಿಯನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

---

### ಏ.3ರ ವರೆಗೂ ದೆಹಲಿ ಸಿಎಂಗೆ ಜೈಲೇ ಗತಿ । ತಕ್ಷಣದ ಪರಿಹಾರ ನೀಡಲು ದೆಹಲಿ ಹೈಕೋರ್ಟ್ ನಕಾರ

# ಅರವಿಂದ ಕೇಜ್ರಿವಾಲ್‌ಗೆ ತಕ್ಷಣ ಪರಿಹಾರವಿಲ್ಲ

**ದೆಹಲಿ:** ಮದ್ಯ ನೀತಿ ಹಗರಣದಲ್ಲಿ ಬಂಧಿತರಾಗಿರುವ ದೆಹಲಿ ಸಿಎಂ ಅರವಿಂದ ಕೇಜ್ರಿವಾಲ್ ಅವರು ಜಾರಿ ನಿರ್ದೇಶನಾಲಯದ ಕಸ್ಟಡಿಯಿಂದ ಬಿಡುಗಡೆ ಕೊಡಿಸಬೇಕು ಎಂಬ ಮನವಿಯನ್ನು ದೆಹಲಿ ಹೈಕೋರ್ಟ್ ಮಾನ್ಯ ಮಾಡಿಲ್ಲ. ಹೀಗಾಗಿ, ಏ.3ರ ವರೆಗೆ ಕೇಜ್ರಿವಾಲ್, ಇಡಿ ಕಸ್ಟಡಿಯಲ್ಲೇ ಉಳಿಯುವಂತಾಗಿದೆ.

ಕೇಜ್ರಿವಾಲ್ ಅವರ ಅರ್ಜಿಗೆ ಪ್ರತಿಕ್ರಿಯಿಸುವಂತೆ ಕೋರ್ಟ್, ಇಡಿಗೆ ನೋಟಿಸ್ ನೀಡಿದ್ದು, ಇದಕ್ಕಾಗಿ ಏ.2ರ ವರೆಗೆ ಸಮಯ ನೀಡಿದೆ. ಏ.3ರಂದು ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ಹೇಳಿದೆ. ಪ್ರಸ್ತುತ ಕೇಜ್ರಿವಾಲ್ ಅವರು ಇಡಿ ವಶದಲ್ಲಿದ್ದು, ಏಜೆನ್ಸಿಯ ದೆಹಲಿ ಕಚೇರಿಯಲ್ಲೇ ಇರಿಸಲಾಗಿದೆ. ಅಲ್ಲದೆ, ಆಪ್ ನಾಯಕರ ಇಡಿ ಕಸ್ಟಡಿ ಗುರುವಾರಕ್ಕೆ ಅಂತ್ಯಗೊಳ್ಳಲಿದೆ. ಮತ್ತೆ ನ್ಯಾಯಾಲಯಕ್ಕೆ ಹಾಜರುಪಡಿಸಲಿದ್ದು, ಅಧಿಕಾರಿಗಳು ಮತ್ತಷ್ಟು ಅವಧಿಗೆ ಕಸ್ಟಡಿಗೆ ನೀಡುವಂತೆ ಕೇಳಲಿದ್ದಾರೆ.

**ಹೆಚ್ಚಿನ ಸಮಯ ಕೋರಿದ್ದ ಇಡಿ :** ಇದಕ್ಕೂ ಮುನ್ನ ಕೋರ್ಟ್‌ನಲ್ಲಿ ವಾದ ಮಂಡಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ.ರಾಜು, ಅರ್ಜಿಯ ಪ್ರತಿಯನ್ನು ತಡವಾಗಿ ನೀಡಲಾಗಿದ್ದು, ದಾಖಲೆ ಅಧ್ಯಯನ ಮಾಡಲು ಇನ್ನಷ್ಟು ಸಮಯ ಬೇಕಾಗಿದೆ ಎಂದಿದ್ದರು. ಆದರೆ, ಕೇಜ್ರಿವಾಲ್ ಪರ ಹಾಜರಾಗಿದ್ದ ಅಭಿಷೇಕ್ ಮನು ಸಿಂಘ್ವಿ ಮಾ.23ರಂದೇ ಅರ್ಜಿ ಸಲ್ಲಿಕೆ ಮಾಡಲಾಗಿದೆ ಎಂದರು. ಅಲ್ಲದೆ, ಈ ಬಂಧನ ಕೇಜ್ರಿವಾಲ್ ಅವರ ಹಕ್ಕುಗಳನ್ನು ಉಲ್ಲಂಘಿಸಿದೆ. ಅವರ ಮೇಲಿನ ಆರೋಪ ಸಾಬೀತು ಪಡಿಸಲು ಇಡಿ ವಿಫಲವಾಗಿದೆ ಎಂದರು. ಅಷ್ಟೇ ಅಲ್ಲ, ಲೋಕಸಭೆ ಚುನಾವಣೆಯಲ್ಲಿ ಪ್ರಚಾರ ನಡೆಸದಂತೆ ಅಡ್ಡಿ ಮಾಡುವ ತಂತ್ರವಾಗಿದೆ ಎಂದು ವಾದ ಮಂಡಿಸಿದರು.



**ಕೇಜ್ರಿವಾಲ್‌ಗೆ ಅನಾರೋಗ್ಯ**

ಬೆಳಗ್ಗೆಯಷ್ಟೇ ಮಾತನಾಡಿದ್ದ ಅರವಿಂದ್ ಕೇಜ್ರಿವಾಲ್ ಅವರ ಪತ್ನಿ ಸುನೀತಾ ಕೇಜ್ರಿವಾಲ್ ಅವರು, ಇಡಿ ಕಸ್ಟಡಿಯಲ್ಲಿ ತಮ್ಮ ಪತಿ ಆರೋಗ್ಯ ಕ್ಷೀಣಿಸಿದೆ ಎಂದು ಆರೋಪಿಸಿದ್ದರು. ಕೇಜ್ರಿವಾಲ್ ಸಕ್ಕರೆ ಕಾಯಿಲೆಯಿಂದ ನರಳುತ್ತಿದ್ದಾರೆ. ಅವರ ಶುಗರ್ ಲೆವೆಲ್ ಕಡಿಮೆಯಾಗಿದೆ. ಸದ್ಯ ಶುಗರ್ ಲೆವೆಲ್ 46ಕ್ಕೆ ಇಳಿದಿದೆ ಎಂದು ಆರೋಪಿಸಿದ್ದರು. ಜತೆಗೆ, ಇಡಿ ಅಧಿಕಾರಿಗಳು ನಮ್ಮ ಮನೆ ಮೇಲೆ ದಾಳಿ ನಡೆಸಿದಾಗ ಕೇವಲ 73 ಸಾವಿರ ರು. ಸಿಕ್ಕಿತ್ತು. ಉಳಿದ ವಿಷಯಗಳನ್ನು ಗುರುವಾರದ ವಿಚಾರಣೆ ವೇಳೆ ಕೋರ್ಟ್‌ಗೆ ತಿಳಿಸಲಾಗುವುದು ಎಂದು ಹೇಳಿದ್ದಾರೆ.

---

# ಕಾಂಗ್ರೆಸ್ ಸಭೆಯಲ್ಲಿ ಭುಗಿಲೆದ್ದ ಆಕ್ರೋಶ

**ಹಾಸನ:** ನಗರದಲ್ಲಿ ಬುಧವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ವಿರುದ್ಧ ಅರಕಲಗೂಡು ಕ್ಷೇತ್ರದ ಪರಾಜಿತ ಅಭ್ಯರ್ಥಿ ಶ್ರೀಧರ್ ಗೌಡ ಬೆಂಬಲಿಗರು ಆಕ್ರೋಶ ಹೊರಹಾಕಿದರು. ಆ ಮೂಲಕ, ಜಿಲ್ಲಾ ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿ ಇಲ್ಲ ಎಂಬುದು ಮತ್ತೊಮ್ಮೆ ಸಾಬೀತಾಯಿತು.

ಮಾರ್ಚ್ 30ರಂದು ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬರುತ್ತಿರುವ ಹಿನ್ನೆಲೆಯಲ್ಲಿ, ನಗರದ ಕಾಂಗ್ರೆಸ್ ಕಚೇರಿಯಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದ ಶ್ರೀಧರ್‌ಗೌಡ, ಈ ಬಾರಿ ಅರಕಲಗೂಡಿನಲ್ಲಿ 30 ಸಾವಿರ ಲೀಡ್ ಕೊಡುತ್ತೇವೆ ಎಂದು ಹೇಳಿದರು. ನಂತರ ಅವರ ಮಾತನ್ನು ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿದ ಸಚಿವ ಕೆ.ಎನ್.ರಾಜಣ್ಣ, 30 ಸಾವಿರ ಲೀಡ್ ನೀಡೋನು, ಚುನಾವಣೆಯಲ್ಲಿ ಯಾಕಪ್ಪ ಮೂರನೇ ಸ್ಥಾನಕ್ಕೆ ಹೋದೆ ಎಂದು ವ್ಯಂಗ್ಯವಾಗಿ ಪ್ರಶ್ನಿಸಿದರು. ಅದಕ್ಕೆ ಆಕ್ಷೇಪಿಸಿದ ಶ್ರೀಧರ್ ಗೌಡ ಬೆಂಬಲಿಗರು ಕೂಗಾಟ ಆರಂಭಿಸಿ, ಭಾಷಣಕ್ಕೆ ಅಡ್ಡಿಪಡಿಸಿದರು.

ಅದರಿಂದ ಕೆರಳಿದ ರಾಜಣ್ಣ, ನೀವು ಶ್ರೇಯಸ್ ಪಟೇಲ್ ಗೆಲ್ಲಿಸಲು ಬಂದಿದ್ದೀರಾ ಅಥವಾ ಸೋಲಿ ಸಲು ಬಂದಿದ್ದೀರಾ? ನಿಮ್ಮ ನಡವಳಿಕೆ ಶ್ರೀಧರ್‌ಗೌ ಡ ಅವರ ರಾಜಕೀಯ ಭವಿಷ್ಯಕ್ಕೆ ಮಾರಕವಾಗಲಿದೆ ಎಂದು ಎಚ್ಚರಿಸಿದರು.ಶ್ರೀಧರ್‌ಗೌಡ ಎದ್ದು ನಿಂತು, ಸುಮ್ಮನಾಗುವಂತೆ ಕಾರ್ಯಕರ್ತರಿಗೆ ಮನವಿ ಮಾಡಿದರೂ, ಕಾರ್ಯಕರ್ತರು ಭಾಷಣಕ್ಕೆ ಅಡ್ಡಿಪಡಿಸುವುದನ್ನು ಮುಂದುವರಿಸಿದರು. ಅದರಿಂದ ಮತ್ತಷ್ಟು ಆಕ್ರೋಶಗೊಂಡ ರಾಜಣ್ಣ, ಕೆಲ ಕಾಂಗ್ರೆಸ್ ಕಾರ್ಯಕರ್ತರು ಬಾಡಿಗೆ ಗಿರಾಕಿಗಳು ಎಂದರು. ಅದಕ್ಕೆ ಪ್ರತಿಯಾಗಿ ಕಾರ್ಯಕರ್ತರ ವಿರೋಧವೂ ಹೆಚ್ಚಿತು.

---

### ಕೇಜ್ರಿವಾಲ್ ಬಂಧನದ ಬಗ್ಗೆ ಹೇಳಿದ್ದ ಅಮೆರಿಕ

# ಅಮೆರಿಕದ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ ಭಾರತ ಸರಕಾರ

**ದೆಹಲಿ:** ಸಿಎಂ ಅರವಿಂದ ಕೇಜ್ರಿವಾಲ್ ಅವರಿಗೆ ನ್ಯಾಯಯುತ, ಪಾರದರ್ಶಕ ಮತ್ತು ಸಮಯೋಚಿತ ಕಾನೂನು ಪ್ರಕ್ರಿಯೆಯನ್ನು ನೀಡಬೇಕು ಎಂಬ ಅಮೆರಿಕದ ಹೇಳಿಕೆ ಬಗ್ಗೆ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಇದಕ್ಕಾಗಿ ರಾಯಭಾರ ಕಚೇರಿಯ ಅಧಿಕಾರಿ ಗ್ಲೋರಿಯಾ ಬೆರ್ಬೆನಾ ಅವರನ್ನು ಕರೆಸಿಕೊಂಡು ಭಾರತದ ಬಲವಾದ ಆಕ್ಷೇಪಣೆಯನ್ನು ಸಲ್ಲಿಕೆ ಮಾಡಿದೆ.

ಇದು ನಮ್ಮ ಆಂತರಿಕ ವಿಷಯವಾಗಿದ್ದು, ಇದರಲ್ಲಿ ಬೇರೆಯವರು ಮೂಗು ತೂರಿಸುವುದು ಬೇಡ. ಬೇರೆ ದೇಶಗಳು ನಮ್ಮ ಸಾರ್ವಭೌಮತ್ವ ಮತ್ತು ಆಂತರಿಕ ವ್ಯವಹಾರಗಳಿಗೆ ಗೌರವ ನೀಡುವ ನಿರೀಕ್ಷೆ ಇದೆ. ಪ್ರಜಾಪ್ರಭುತ್ವದ ವಿಚಾರಗಳಲ್ಲಿ ಈ ಜವಾಬ್ದಾರಿ ಇನ್ನೂ ಹೆಚ್ಚು ಎಂದು ಖಡಕ್ಕಾಗಿಯೇ ಹೇಳಿದೆ. ಜತೆಗೆ ಭಾರತದ ನ್ಯಾಯಾಂಗ ಪ್ರಕ್ರಿಯೆ ಕುರಿತಂತೆ ಅನಗತ್ಯವಾಗಿ ಅನುಮಾನ ವ್ಯಕ್ತಪಡಿಸಬಾರದು ಎಂದು ವಿದೇಶಾಂಗ ಇಲಾಖೆ ಹೇಳಿದೆ.